ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ಗ್ರಾಮೀಣಾ ಭಾಗದ ಕಲೆಗಳು ಮತ್ತು ಕಲಾವಿದರ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1348 (1589) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗ್ರಾಮೀಣಾ ಭಾಗದಲ್ಲಿ ಕಲೆಗಳು ಮತ್ತು ಈ ಕಲೆಗಳನ್ನು ಪ್ರಚಾರ ಮಾಡುವ ಕಲಾವಿದರನ್ನು ಗುರುತಿಸಿ ಇವರಿಗೆ ಮನ್ನಣೆ ನೀಡದಿರುವುದರಿಂದ ಗ್ರಾಮೀಣಾ ಭಾಗದ ಕಲೆಗಳು ಅವಸಾನದ ಅಂಚಿಗೆ ತಲುಪುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಗ್ರಾಮೀಣಾ ಭಾಗದ ಕಲೆಗಳನ್ನು ಜೀವಂತವಾಗಿರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಗ್ರಾಮೀಣಾ ಭಾಗದ ಕಲಾವಿದರು ಸಂಘಟಿತರಾಗಿ ಕಲಾ ಸಂಘ/ಸಂಸ್ಥೆಗಳನ್ನು ಸ್ಥಾಪನೆ ಮಾಡಿಕೊಂಡು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಬರುವ ಅವಕಾಶಗಳನ್ನು ಮತ್ತು ಸಹಾಯ ಧನವನ್ನು ಪಡೆಯುವಲ್ಲಿ ವಿಫಲರಾಗುತ್ತಿದ್ದು, ಗ್ರಾಮೀಣಾ ಭಾಗದ ಕಲಾವಿದರನ್ನು ಗುರುತಿಸಿ ಅವರಿಗೆ ಸಿಗಬೇಕಾದ ಅವಕಾಶ/ಸೌಲಭ್ಯಗಳನ್ನು ತಲುಪಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿರುವ ಕಲಾ ಸಂಘ/ಸಂಸ್ಥೆಗಳು ಯಾವುವು; ಕಳೆದ 3 ವರ್ಷಗಳಲ್ಲಿ ಈ ಕಲಾ ಸಂಘ/ಸಂಸ್ಥೆಗಳು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಪಡೆದಿರುವ ಸಹಾಯ ಧನದ ವಿವರ ನೀಡುವುದು ?